**ಕರ್ನಾಟಕ ಸರ್ಕಾರ**

# ಭ್ರಷ್ಟಾಚಾರ ನಿಗ್ರಹ ದಳ

**ದಿನಾಂಕ: 19.03.2019**

## ಪತ್ರಿಕಾ ಪ್ರಕಟಣೆ

## ಎಸಿಬಿಯಿಂದ ಭ್ರಷ್ಟಾಚಾರ ಆರೋಪಿತ 4 ಅಧಿಕಾರಿಗಳ ವಿರುದ್ದ ದಾಳಿ

## ಇಂದು ರಾಜ್ಯಾದ್ಯಂತ 10 ಸ್ಥಳಗಳಲ್ಲಿ ವಿವಿಧ ಎಸಿಬಿ ತಂಡಗಳಿಂದ ಕಾರ್ಯಾಚರಣೆ

ದಿನಾಂಕ:19.03.2019 ರಂದು ಕರ್ನಾಟಕ ರಾಜ್ಯ ಭ್ರಷ್ಟಾಚಾರ ನಿಗ್ರಹ ದಳವು ರಾಜ್ಯದ **4 ವಿವಿಧ ಸರ್ಕಾರಿ ನೌಕರರು** ತಮ್ಮ ಬಲ್ಲ ಮೂಲಗಳಿಗಿಂತ ಅಸಮತೋಲನ ಆಸ್ತಿ-ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ ಅಕ್ರಮ ಆಸ್ತಿ ಗಳಿಕೆ ಪ್ರಕರಣಗಳನ್ನು ದಾಖಲಿಸಿ ಅವರಿಗೆ ಸಂಬಂಧಿಸಿದ **10 ಸ್ಥಳಗಳ ಮೇಲೆ** ಇಂದು ದಾಳಿ ನಡೆಸಿರುತ್ತದೆ. ಶೋಧನಾ ಕಾರ್ಯವು ಮುಂದುವರೆದಿದ್ದು ಈವರೆಗೆ ಶೋಧನೆ ನಡೆಸಲಾದ ಜಾಗಗಳ ಮತ್ತು ಸರ್ಕಾರಿ ಅಧಿಕಾರಿಗಳ ಮಾಹಿತಿ ಈ ಕೆಳಕಂಡಂತಿರುತ್ತವೆ.

1. **ಶ್ರೀ.ಸತೀಶ್ ಬಿ.ಸಿ, ಸಹಕಾರ ಸಂಘಗಳ ಅಪರ ನಿಬಂಧಕರು, ಸಹಕಾರ ಇಲಾಖೆ, ಕೇಂದ್ರ ಕಛೇರಿ, ಅಲಿ ಅಸ್ಕರ್ ರಸ್ತೆ, ಬೆಂಗಳೂರು.**
   ಇವರ ಬೆಂಗಳೂರು ನಗರದ ವಾಸದ ಮನೆ, ಹಾಗೂ ಇವರ ಸಂಬಂಧಿಕರ ಬೆಂಗಳೂರು ನಗರದಲ್ಲಿನ ವಾಸದ ಮನೆ.

2. **ಶ್ರೀ.ಶರದ್ ಗಂಗಪ್ಪ ಇಜ್ರಿ, ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ವಿಜಯಪುರ (ಕೆ.ಆರ್.ಐ.ಡಿ.ಎಲ್ )**
   ಇವರ ವಿಜಯಪುರ ನಗರದಲ್ಲಿನ ನಿವಾಸ, ಹಾಗೂ ಇವರು ಕರ್ತವ್ಯ ನಿರ್ವಹಿಸುತ್ತಿರುವ ಉಪ ನಿರ್ದೇಶಕರ ಕಛೇರಿ, ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ವಿಜಯಪುರ,

3. **ಶ್ರೀ.ಪ್ರಕಾಶ್ ಗೌಡ ಕುದರಿಮೊಟ, ಕೃಷಿ ಅಧಿಕಾರಿ, ರೈತ ಸಂಪರ್ಕ ಕೇಂದ್ರ ಮುಂಡರಗಿ, ಗದಗ ಜಿಲ್ಲೆ.**
   ಇವರ ಮುಂಡರಗಿಯಲ್ಲಿನ ಎರಡು ವಾಸದ ಮನೆ, ಹಾಗು ಇವರು ಕಾರ್ಯನಿರ್ವಹಿಸುತ್ತಿರುವ ರೈತ ಸಂಪರ್ಕ ಕೇಂದ್ರ, ಮಂಡರಗಿ ವಿಜಯಪುರ ಜಿಲ್ಲೆ.

4. **ಶ್ರೀ.ಮಂಜುನಾಥ್ ಎಸ್.ಬಿ, ಸಹಾಯಕ ಕಂದಾಯ ಅಧಿಕಾರಿ, ಜೆ.ಬಿ.ನಗರ ಉಪ ವಿಭಾಗ, ಬಿಬಿಎಂಪಿ, ಬೆಂಗಳೂರು.**
   ಇವರ ಬೆಂಗಳೂರು ನಗರದಲ್ಲಿನ ನಿವಾಸ ಮತ್ತು ಚೆನ್ನರಾಯಪಟ್ಟಣದಲ್ಲಿನ ಇವರ ಸಂಬಂಧಿಕರ ಮನೆ ಹಾಗೂ ಇವರು ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕಂದಾಯ ಅಧಿಕಾರಿಗಳ ಕಛೇರಿ, ಜೆ.ಬಿ.ನಗರ ಉಪ ವಿಭಾಗ, ಬಿಬಿಎಂಪಿ, ಬೆಂಗಳೂರು.

ಕರ್ನಾಟಕ ರಾಜ್ಯ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆಯ ವಿವಿಧ ತಂಡಗಳಂದ ಮೇಲ್ಕಂಡ ಆರೋಪಿತ ಸರ್ಕಾರಿ ನೌಕರರ ವಿರುದ್ಧ ದಾಳಿ ಮುಂದುವರೆದಿದ್ದು, ಸದರಿ ಸರ್ಕಾರಿ ನೌಕರರು ಹೊಂದಿರುವ ಆಸ್ತಿ-ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ.